**Bangalore**
**Regional News**
**23.01.2025 / 2.30 p.m.**
**ಆಕಾಶವಾಣಿ ಬೆಂಗಳೂರು**

**ಪ್ರದೇಶ ಸಮಾಚಾರ**

**ಮುಖ್ಯಾಂಶಗಳು**

೧. ಬೆಂಗಳೂರಿನ ಅರಮನೆ ಮೈದಾನದಲ್ಲಿ ಅಂತಾರಾಷ್ಟ್ರೀಯ ಸಿರಿಧಾನ್ಯ ಮೇಳಕ್ಕೆ ಚಾಲನೆ

೨. ಮುಡಾ ಹಗರಣ ; ಲೋಕಾಯುಕ್ತರ ಆರೋಪ ಮುಕ್ತ ವರದಿ ಬಗ್ಗೆ ಅರಿವಿಲ್ಲ - ಮುಖ್ಯಮಂತ್ರಿ ಸಿದ್ದರಾಮಯ್ಯ ಸ್ಪಷ್ಟನೆ

೩. ಭದ್ರಾವತಿ ಆಕಾಶವಾಣಿಯ ಎಫ್‌ಎಂ ಟ್ರಾನ್ಸ್‌ಮೀಟರ್‌ಗೆ ಕೇಂದ್ರ ಸಚಿವ ಡಾ. ಎಲ್. ಮುರುಗನ್ ಚಾಲನೆ

೪. ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್‌ಗಳ ಕಿರುಕುಳ ನಿಯಂತ್ರಿಸುವಲ್ಲಿ ರಾಜ್ಯ ಸರ್ಕಾರ ವಿಫಲ - ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪ

******************

ಬೆಂಗಳೂರಿನ ಅರಮನೆ ಮೈದಾನದಲ್ಲಿ ಅಯೋಜಿಸಲಾಗಿರುವ ಸಾವಯವ ಮತ್ತು ಸಿರಿಧಾನ್ಯ ಅಂತಾರಾಷ್ಟ್ರೀಯ ವಾಣಿಜ್ಯ ಮೇಳವನ್ನು ಇಂದು ಮುಖ್ಯಮಂತ್ರಿ ಸಿದ್ಧರಾಮಯ್ಯ ಉದ್ಘಾಟಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಮುಖ್ಯಮಂತ್ರಿ ಸಿದ್ದರಾಮಯ್ಯ, ದೇಶದಲ್ಲಿ ಶೇಕಡ ೩೮.೫೦ ರಷ್ಟು ರೈತರು ಸಿರಿಧಾನ್ಯ ಬೆಳೆಯುತ್ತಿದ್ದಾರೆ ಎಂದು ಹೇಳಿದರು.

ಸಚಿವ ಚೆಲುವರಾಯಸ್ವಾಮಿ ಮಾತನಾಡಿ, ರಾಜ್ಯದಲ್ಲಿ ಕಳೆದ ೬ ವರ್ಷಗಳಿಂದ ಸಾವಯವ ಮತ್ತು ಸಿರಿಧಾನ್ಯ ಅಂತಾರಾಷ್ಟ್ರೀಯ ವಾಣಿಜ್ಯ ಮೇಳವನ್ನು ಅಯೋಜಿಸಲಾಗುತ್ತಿದೆ. ಅಂತಾರಾಷ್ಟ್ರೀಯ ಮಟ್ಟದಲ್ಲಿ ಸಿರಿಧಾನ್ಯಕ್ಕೆ ಮನ್ನಣೆ ದೊರೆತಿದೆ. ಭಾರತದಲ್ಲಿ ಸಿರಿಧಾನ್ಯ ಸಾಂಪ್ರದಾಯಿಕ ಆಹಾರ ಪದಾರ್ಥವಾಗಿದ್ದು, ಕರ್ನಾಟಕ ಸಿರಿಧಾನ್ಯ ಬೆಳೆಯುವಲ್ಲಿ ಮುಂಚೂಣಿಯಲ್ಲಿದೆ ಎಂದರು.

ಕಾರ್ಯಕ್ರಮದಲ್ಲಿ ಉಪಮುಖ್ಯಮಂತ್ರಿ ಡಿ.ಕೆ ಶಿವಕುಮಾರ್, ಸೂಕ್ಷ್ಮ ಸಣ್ಣ ಮಧ್ಯಮ ಉದ್ಯಮ ರಾಜ್ಯ ಸಚಿವೆ ಶೋಭಾ ಕರಂದ್ಲಾಜೆ, ಕಂದಾಯ ಸಚಿವ ಕೃಷ್ಣಬೈರೇಗೌಡ, ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಕೃಷಿ ಸಚಿವ ಎನ್. ಚೆಲುವರಾಯಸ್ವಾಮಿ, ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

*****************

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದ ಹಗರಣದಲ್ಲಿ ಲೋಕಾಯುಕ್ತರು ತಮಗೆ ಹಾಗೂ ಪತ್ನಿ ಪಾರ್ವತಿಗೆ ಕ್ಲೀನ್‌ಚಿಟ್ ನೀಡಿದ ಬಗ್ಗೆ ತಮಗೆ ತಿಳಿದಿಲ್ಲ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾತನಾಡಿದ ಅವರು, ರಾಜ್ಯದಲ್ಲಿ ಅಧಿಕಾರ ಹಂಚಿಕೆ ಕುರಿತಂತೆ ಹೈಕಮಾಂಡ್ ನಿರ್ಧಾರವೇ ಅಂತಿಮ ಎಂದು ಹೇಳಿದ್ದಾರೆ.

ಇದೇ ವೇಳೆ ದಾವೋಸ್ ಶೃಂಗಸಭೆ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಬಜೆಟ್ ಸಿದ್ಧತೆ ಮಾಡಿಕೊಳ್ಳುತ್ತಿರುವುದರಿಂದ ತಾವು ದಾವೋಸ್‌ಗೆ ತೆರಳುತ್ತಿಲ್ಲ ಎಂದು ತಿಳಿಸಿದ್ದಾರೆ.

*****************

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ಒತ್ತಡಕ್ಕೆ ಮಣಿದು, ಲೋಕಾಯುಕ್ತ ಸಂಸ್ಥೆ ಕ್ಲೀನ್‌ಚಿಟ್ ನೀಡಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ. ವಿಜಯೇಂದ್ರ ಆರೋಪಿಸಿದ್ದಾರೆ.

ತನಿಖೆ ನಡೆಯುವಾಗ ಆಧಾರರಹಿತ ವರದಿ ನೀಡಲು ಸಾಧ್ಯವಿಲ್ಲ ಎಂದು ತಿಳಿಸಿದ್ದಾರೆ.

ಇದೇ ವೇಳೆ ಬಿಜೆಪಿ ಪಕ್ಷದೊಳಗಿನ ಗೊಂದಲ ಕುರಿತಂತೆ ಪ್ರತಿಕ್ರಿಯಿಸಿದ ಅವರು, ಕೆಲವು ಬೆಳವಣಿಗೆಗಳು ಬೇಸರ ತರಿಸಿದೆ ಎಂದು ತಿಳಿಸಿದ್ದಾರೆ.

ಯಾವುದೇ ಗೊಂದಲಕ್ಕೆ ಅವಕಾಶ ಮಾಡಿಕೊಡದಂತೆ ಮಾಜಿ ಸಚಿವ ಶ್ರೀರಾಮುಲು ಅವರಿಗೆ ಮನವಿ ಮಾಡಿದ್ದಾರೆ. ಪಕ್ಷವನ್ನು ಅಧಿಕಾರಕ್ಕೆ ತರುವ ನಿಟ್ಟಿನಲ್ಲಿ ಎಲ್ಲರೂ ಒಟ್ಟಾಗಿ ಸಾಗಬೇಕು ಎಂದು ಹೇಳಿದ್ದಾರೆ.

*****************

ಶಿವಮೊಗ್ಗದಲ್ಲಿ ದೂರದರ್ಶನ ಕೇಂದ್ರವನ್ನು ಪ್ರಸ್ತುತ ದಿನಮಾನಕ್ಕೆ ತಕ್ಕಂತೆ ಉನ್ನತೀಕರಿಸಲಾಗುವುದು ಎಂದು ಕೇಂದ್ರ ಸಚಿವ ಡಾ. ಎಲ್. ಮುರುಗನ್ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿಂದು ಭದ್ರಾವತಿ ಆಕಾಶವಾಣಿಯ ೧೦ ಕೆ.ಡಬ್ಲೂ ಎಫ್ ಎಂ ಟ್ರಾನ್ಸ್‌ಮೀಟರ್‌ಗೆ ಪೂಜೆ ಸಲ್ಲಿಸಿ ಮಾತನಾಡಿದ ಅವರು ಇದಕ್ಕಾಗಿ ಕೇಂದ್ರ ಸರ್ಕಾರ ಹಣಕಾಸು ನೆರವು ನೀಡಿದೆ ಎಂದು ತಿಳಿಸಿದ್ದಾರೆ.

ಇದೇ ವೇಳೆ ಸಂಸದ ರಾಘವೇಂದ್ರ, ನಿರಂತರ ಪ್ರಯತ್ನದ ಫಲವಾಗಿ ಎಫ್‌ಎಂ ಮರುಪ್ರಸಾರ ಟ್ರಾನ್ಸ್‌ಮೀಟರ್ ಸ್ಥಾಪನೆ ಸಾಧ್ಯವಾಗಿದ್ದು, ಇಲ್ಲಿ ಪ್ರತ್ಯೇಕ ಸ್ಟುಡಿಯೋ ಸ್ಥಾಪಿಸಲಾಗುವುದು ಎಂದು ಹೇಳಿದ್ದಾರೆ.

****ಧ್ವನಿ**** ಡಾ. ಎಲ್. ಮುರುಗನ್

ಸಂಸದ ಬಿ.ವೈ. ರಾಘವೇಂದ್ರ ಮಾತನಾಡಿ, ನೂತನ ಟ್ರಾನ್ಸ್‌ಮೀಟರ್‌ನಿಂದ ವೈವಿಧ್ಯಮಯ ಕಾರ್ಯಕ್ರಮಗಳ ಪ್ರಸಾರಕ್ಕೆ ಅನುಕೂಲವಾಗಲಿದೆ. ೬೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಕಾರ್ಯಕ್ರಮ ಕೇಳಬಹುದಾಗಿದ್ದು, ಈ ಮೂಲಕ ಪ್ರಧಾನಿ ನರೇಂದ್ರ ಮೋದಿ ಅವರ ಮನ್ ಕಿ ಬಾತ್ ಕಾರ್ಯಕ್ರಮವು ಇನ್ನಷ್ಟು ಜನಪ್ರಿಯವಾಗಲಿದೆ ಎಂದು ತಿಳಿಸಿದರು.

*****************

ರಾಜ್ಯದಲ್ಲಿ ಮೈಕ್ರೋ ಫೈನಾನ್ಸ್‌ಗಳನ್ನು ನಿಯಂತ್ರಿಸುವಲ್ಲಿ ಸರ್ಕಾರ ವಿಫಲವಾಗಿದೆ ಎಂದು ಮಾಜಿ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಆರೋಪಿಸಿದ್ದಾರೆ.

ಹುಬ್ಬಳ್ಳಿಯಲ್ಲಿ ಮಾತನಾಡಿದ ಅವರು, ಬಹಳಷ್ಟು ಕುಟುಂಬಗಳು ಮೈಕ್ರೋ ಫೈನಾನ್ಸ್‌ಗಳಿಂದಾಗಿ ಮನೆ ಬಿಟ್ಟು ಹೋಗಿ, ಆತ್ಮಹತ್ಯೆ ಮಾಡಿಕೊಳ್ಳುವಂತೆ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಕಳವಳ ವ್ಯಕ್ತಪಡಿಸಿದ್ದಾರೆ.

ಹೆಚ್ಚು ಬಡ್ಡಿ ವಸೂಲಿ ಮಾಡುವವರ ನಿಯಂತ್ರಣಕ್ಕೆ ತಂದಿರುವ ಕಾನೂನು ನ್ಯಾಯಾಲಯದಲ್ಲಿ ರದ್ದಾಗಿದ್ದು, ಸರ್ಕಾರ ಕೂಡಲೇ ತೆರವುಗೊಳಿಸಿ ಮೈಕ್ರೋ ಫೈನಾನ್ಸ್‌ಗಳನ್ನು ನಿಯಂತ್ರಿಸಬೇಕು ಎಂದು ಆಗ್ರಹಿಸಿದ್ದಾರೆ.

*****************

ಭಾರತವನ್ನು ಬ್ರಿಟೀಷರ ಆಳ್ವಿಕೆಯಿಂದ ಮುಕ್ತಗೊಳಿಸಿ, ದೇಶಕ್ಕಾಗಿ ತಮ್ಮ ಪ್ರಾಣವನ್ನೇ ತ್ಯಾಗ ಮಾಡಿದ ಅಪ್ರತಿಮ ದೇಶಭಕ್ತ ನೇತಾಜಿ ಸುಭಾಷ್ ಚಂದ್ರ ಬೋಸ್ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ನೇತಾಜಿ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಮಾತನಾಡಿದ ಅವರು, ಇಂದು ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ೧೨೮ ನೇ ಜನ್ಮ ದಿನ. ದೇಶದ ಬಗ್ಗೆ ಅಪಾರ ಗೌರವಾಭಿಮಾನ ಹೊಂದಿದ್ದ ಮಹಾನ್ ದೇಶಭಕ್ತ ಅವರು ಎಂದು ಹೇಳಿದ್ದಾರೆ.

****ಧ್ವನಿ****ಮುಖ್ಯಮಂತ್ರಿ

*****************

ಮುಖ್ಯಮಂತ್ರಿ ಸಿದ್ದರಾಮಯ್ಯ ಮುಂದೆ ಶರಣಾದ ಆರು ಮಾವೋವಾದಿಗಳ ಪೊಲೀಸ್ ಕಸ್ಟಡಿ ಇಂದಿಗೆ ಅಂತ್ಯವಾಗಿದೆ. ಈ ಹಿನ್ನೆಲೆಯಲ್ಲಿ ಪೊಲೀಸರು ಅವರನ್ನು ಇಂದು ರಾಷ್ಟ್ರೀಯ ತನಿಖಾ ಸಂಸ್ಥೆ - ಎನ್ಐಎ, ವಿಶೇಷ ನ್ಯಾಯಾಲಯಕ್ಕೆ ಹಾಜರುಪಡಿಸಲಿದ್ದಾರೆ.

ಶರಣಾದ ಮಾವೋವಾದಿಗಳನ್ನು ವಶಕ್ಕೆ ಪಡೆಯಲು ಕೇರಳ ಪೊಲೀಸರು ಸಜ್ಜಾಗಿದ್ದಾರೆ. ಚಿಕ್ಕಮಗಳೂರಿನ ಕೊಪ್ಪ ಡಿವೈಎಸ್‌ಪಿ ಬಾಲಾಜಿ ಸಿಂಗ್ ನೇತೃತ್ವದಲ್ಲಿ ನಕ್ಸಲರ ವಿಚಾರಣೆ ನಡೆದಿತ್ತು. ಜನವರಿ ೮ ರಂದು ಬೆಂಗಳೂರಿನ ಮುಖ್ಯಮಂತ್ರಿ ಗೃಹ ಕಚೇರಿ ಕೃಷ್ಣಾದಲ್ಲಿ ನಕ್ಸಲರು ಶರಣಾಗಿದ್ದರು.

*****************

ರಾಜ್ಯದಲ್ಲಿ ವೈಮಾಂತರಿಕ್ಷ ಮತ್ತು ರಕ್ಷಣಾ ವಲಯದಲ್ಲಿ ಹೂಡಿಕೆ ಮಾಡಿರುವ ಜಾಗತಿಕ ಶ್ರೇಣಿಯ ಸ್ಯಾಫ್ರಾನ್ ಸಮೂಹದ ಅಧ್ಯಕ್ಷ ರಾಸ್ ಮ್ಯಾಕಲ್ನೆಸ್ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಇಂದು ವಿಧಾನಸೌಧದ ಕಚೇರಿಯಲ್ಲಿ ಭೇಟಿಯಾದರು.

ಭೇಟಿಯ ವೇಳೆ ರಾಜ್ಯದ ಕೈಗಾರಿಕಾಸ್ನೇಹಿ ನೀತಿ, ಹೂಡಿಕೆ ಕಾರ್ಯಪರಿಸರ, ವಿಷನ್ ಗ್ರೂಪ್ ಚಟುವಟಿಕೆಗಳು ಇತ್ಯಾದಿಗಳನ್ನು ಕುರಿತು ವಿಚಾರ ವಿನಿಮಯ ನಡೆಸಲಾಯಿತು.

ಕಂಪನಿಯು ಬೆಂಗಳೂರಿನಲ್ಲಿ ಹೊಂದಿರುವ ಸ್ಯಾಫ್ರಾನ್ ಡೇಟಾ ಸಿಸ್ಟಮ್ಸ್ ಮತ್ತು ಸ್ಯಾಫ್ರಾನ್ ಹೆಲಿಕಾಪ್ಟರ್ ಎಂಜಿನ್ಸ್ ಕಚೇರಿಗಳು ನಡೆಸುತ್ತಿರುವ ಚಟುವಟಿಕೆಗಳ ಬಗ್ಗೆ ರಾಸ್ ಅವರು ಮಾಹಿತಿ ನೀಡಿದರು.

ಈ ಸಂದರ್ಭದಲ್ಲಿ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವ ಎಂ.ಬಿ. ಪಾಟೀಲ್ ಉಪಸ್ಥಿತರಿದ್ದರು.

*****************

ಕೇಂದ್ರ ಸರ್ಕಾರ ದೇಶವಿಡೀ ಸರ್ಕಾರಿ ಮತ್ತು ಸಾರ್ವಜನಿಕ ಆಸ್ತಿಪಾಸ್ತಿಗಳ ಮಾಹಿತಿಯನ್ನು ಡಿಜಿಟಲೀಕರಣ ಮಾಡಲು ರೂಪಿಸಿರುವ ಡಿಜಿಟಲ್ ನಕ್ಷಾ  ಯೋಜನೆಗೆ ಕೋಲಾರ ನಗರಸಭೆ ಆಯ್ಕೆಯಾಗಿದೆ.

ಕೋಲಾರ ನಗರಸಭೆಯು ಸೇರಿದಂತೆ ಕರ್ನಾಟಕದ ಹತ್ತು ನಗರ ಸ್ಥಳೀಯ ಸಂಸ್ಥೆಗಳನ್ನು  ಈ ಯೋಜನೆಗೆ ಆಯ್ಕೆ ಮಾಡಲಾಗಿದೆ. ಕಂದಾಯ ಇಲಾಖೆಯ ದಾಖಲೆಗಳ ಡಿಜಿಟಲೀಕರಣದ ರೀತಿಯಲ್ಲೇ ನಗರ ಪ್ರದೇಶಗಳಲ್ಲೂ ಇದು ಜಾರಿಗೆ ಬರಲಿದೆ.

ಖಾಲಿ ನಿವೇಶನಗಳು, ದೇವಾಲಯಗಳು, ಸಾರ್ವಜನಿಕ ಸ್ಥಳಗಳ ಮಾಹಿತಿ ಸಂಗ್ರಹಿಸಿ ಡಿಜಿಟಲೀಕರಣ ಮಾಡಲಾಗುತ್ತದೆ. ಇದೇ ರೀತಿ ಕುಡಿಯುವ ನೀರಿನ ಪೈಪ್ ಲೈನ್, ವಿದ್ಯುತ್ ಮತ್ತು ಟೆಲಿಫೋನ್ ತಂತಿಗಳೂ ಸೇರಿದಂತೆ ಮೂಲ ಸೌಕರ್ಯಗಳ “ಎಲ್ಲ ಮಾಹಿತಿಯನ್ನೂ ದಾಖಲಿಸಲಾಗುತ್ತದೆ. ಇದರಿಂದಾಗಿ ಸಾರ್ವಜನಿಕರ ಮತ್ತು ಸರ್ಕಾರದ ಎಲ್ಲ ಆಸ್ತಿಪಾಸ್ತಿಗಳ ಮಾಹಿತಿ ಕಂಪ್ಯೂಟರೀಕರಣಗೊಳ್ಳಲಿದೆ. ಇದಕ್ಕಾಗಿ ನಗರಸಭೆ ೫ ತಂಡಗಳನ್ನು ರಚಿಸಿದೆ.

*****************

ಜನವರಿ ೨೬ರಂದು ನವದೆಹಲಿಯಲ್ಲಿ  ನಡೆಯುವ ಗಣರಾಜ್ಯೋತ್ಸವಕ್ಕೆ ಭಾಗವಹಿಸಲು ಚಿತ್ರದುರ್ಗದ ಮೂವರು ಕೃಷಿಕರನ್ನು ಆಯ್ಕೆ ಮಾಡಲಾಗಿದೆ.

ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲೂಕಿನ  ಪರಷರಾಂಪುರ ಹೋಬಳಿ ಓಬಳ್ಳಾಪುರ ನಿವಾಸಿ ರೈತ ಮಹಿಳೆ ವೀಣಾ ಅವರನ್ನು ಅಟಲ್ ಭೂಜಲ ಯೋಜನೆಯಲ್ಲಿ ಮಾಡಿದ ಸಾಧನೆಯಿಂದ ಗುರುತಿಸಲಾಗಿದೆ.

ಚಳ್ಳಕೆರೆ ತಾಲೂಕಿನ ತಳುಕು ಗುಡಿಹಳ್ಳಿ ಗ್ರಾಮದ ರಂಗಪ, ನೈಸರ್ಗಿಕ  ಜಲ ಮೂಲದಿಂದ ಮಿತ ನೀರಿನಿಂದ  ಬೆಳೆಗಳನ್ನು ಬೆಳೆದು ಸಾಧನೆ ಮಾಡಿದ್ದಾರೆ.

ದೊಡ್ಡಚೆಲ್ಲೂರು ಗ್ರಾಮದ ಅರುಣಾ ಸ್ವಸಹಾಯ ಸಂಘದ ಸದಸ್ಯರಾಗಿ ಸಾವಯವ ಕೃಷಿ ವಿಷಮುಕ್ತ ಆಹಾರ ಬೆಳೆಯುವ ಬಗ್ಗೆ ರೈತರಿಗೆ ಜಾಗೃತಿ ಮೂಡಿಸಿದ ಹಿನ್ನಲೆಯಲ್ಲಿ  ಗಣರಾಜ್ಯೋತ್ಸ ಕಾರ್ಯಕ್ರಮದಲ್ಲಿ ಭಾಗವಹಿಸಲು ಆಯ್ಕೆಯಾಗಿದ್ದಾರೆ.

*****************

ಯಾದಗಿರಿ-ಶಹಾಪುರ ರಸ್ತೆಯ ಚಟ್ನಳ್ಳಿ ಕ್ರಾಸ್ ಬಳಿ ಜನವರಿ ೩ರಂದು ಕುರಿ ವ್ಯಾಪಾರಿಗಳನ್ನು ಅಡ್ಡಗಟ್ಟಿ ೪ ಲಕ್ಷ ರೂಪಾಯಿ ಕಿತ್ತುಕೊಂಡು ಪರಾರಿಯಾಗಿದ್ದ ಪ್ರಕರಣ ಸಂಬಂಧ ಮೂವರು ಆರೋಪಿಗಳನ್ನು ಯಾದಗಿರಿ ಪೊಲೀಸರು ಬಂಧಿಸಿದ್ದಾರೆ.

******************

ಸಂಕ್ಷಿಪ್ತ ಸುದ್ದಿಗಳು

೧. ರಾಜ್ಯದಲ್ಲಿ ವರ್ಷದಿಂದ ವರ್ಷಕ್ಕೆ ಶಾಲೆಯಿಂದ ಹೊರಗೆ ಉಳಿಯುತ್ತಿರುವ ಮಕ್ಕಳ ಸಂಖ್ಯೆ ಹೆಚ್ಚಾಗುತ್ತಿದ್ದು, ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗ ಇದನ್ನು ಗಂಭೀರವಾಗಿ ಪರಿಗಣಿಸಿದೆ ಎಂದು ಆಯೋಗದ ಸದಸ್ಯೆ ಅಪರ್ಣ ಎಂ.ಕೊಳ್ಳ ದಾವಣಗೆರೆಯಲ್ಲಿ ಹೇಳಿದ್ದಾರೆ.

೨. ಶಾಲೆಗಳು ಮಕ್ಕಳಿಗೆ ಶಿಕ್ಷಣ ನೀಡುವ ಜೊತೆಗೆ ಸಂಪೂರ್ಣ ಸುರಕ್ಷೆ ಒದಗಿಸುವ ರಕ್ಷಣಾ ಕೇಂದ್ರಗಳಾಗಬೇಕು ಎಂದು ಕರ್ನಾಟಕ ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಡಾ.ತಿಪ್ಪೇಸ್ವಾಮಿ ಕೆ.ಟಿ ಕಾರವಾರದಲ್ಲಿ ತಿಳಿಸಿದರು.

೩. ರಾಜ್ಯ ಸರ್ಕಾರದ ಮಹಾಕಾಂಕ್ಷೆಯ ಯೋಜನೆಯಾದ "ಪ್ರೇರಣಾ ಮೆಂಟರ್ ಶಿಪ್ " ಕಾರ್ಯಕ್ರಮದಡಿ ಗದಗ ನಗರದ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯಲ್ಲಿ ವಿಶೇಷ ಉಪನ್ಯಾಸ ಮಾಲಿಕೆ ಕಾರ್ಯಕ್ರಮ ನಡೆಯಿತು.

*********ಮುಕ್ತಾಯ*********